must understand my difficulty also. ದಯವಿಟ್ಟು ನಿಮ್ಮ ಪ್ರಶ್ನೆಯನ್ನು ಶೂನ್ಯ ವೇಳೆಯಲ್ಲಿ ಪ್ರಸ್ತಾಪ ಮಾಡಿ. Question Hour is over.

ಆ) ಚುಕ್ಕೆ ಗುರ್ತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು ಮಂಡಿಸಲಾಯಿತು

ಅಧ್ಯಕ್ಷರು: ಮಂಡಿಸಲಾಯಿತು ದಿನಾಂಕ: 19.03.2003ರ ಸದನದಲ್ಲಿ ಉತ್ತರಿಸುವ 15 ಪ್ರಶ್ನೆಗಳ ಪೈಕಿ 14 ಉತ್ತರಗಳನ್ನು ಹಾಗೂ ಲಿಖಿತ ಮೂಲಕ ಉತ್ತರಿಸುವ 116 ಪ್ರಶ್ನೆಗಳ ಪೈಕಿ 101 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತೇನೆ. (ಅನುಬಂಧ I)

2. ಸಭೆಯ ಮುಂದಿಡಲಾಗುವ ಕಾಗದ ಪತ್ರ

ಶ್ರೀ ಟಿ. ರಾಜಣ್ಣ: ಕಾರ್ಯದರ್ಶಿ (ವಿಧಾನ ಸಭೆ): ಮಾನ್ಯ ಅಧ್ಯಕ್ಷರೆ, ವಿಧಾನ ಪರಿಷತ್ತಿನಿಂದ ಅಂಗೀಕೃತವಾದ ರೂಪದಲ್ಲಿರುವ "ಕರ್ನಾಟಕ, ಭೂ ಸುಧಾರಣೆಗಳ (ತಿದ್ದುಪಡಿ) ವಿಧೇಯಕ, 2002ನ್ನು ಸಭೆಯ ಮುಂದಿಡುತ್ತೇನೆ. (ಅನುಬಂಧ -II)

3. ಅಧ್ಯಕ್ಷರ ಅಪ್ಪಣೆ ಮೇರೆಗೆ ಪ್ರಸ್ತಾಪಿಸಲಾದ ವಿಷಯಗಳು

(ಅ) ವಿಷಯ: ಅಡಿಕೆ ಬೆಳೆಗಾರರ ಸಾಲಮರುಪಾವತಿ ಬಗ್ಗೆ

ಶ್ರೀ ಡಿ.ವಿ. ಸದಾನಂದಗೌಡ: ಮಾನ್ಯ ಅಧ್ಯಕ್ಷರೆ, ಅತ್ಯಂತ ತುರ್ತಾದ ಒಂದು ವಿಚಾರವನ್ನು ಸಭೆಯ ಮುಂದೆ ಪ್ರಸ್ತಾಪ ಮಾಡುವುದಕ್ಕೆ ಇಚ್ಛಿಪಟ್ಟಿದ್ದೇನೆ. ಅದೇನೆಂದರೆ, ಮಾರ್ಚ್ 31 ರೊಳಗೆ ಅಡಿಕೆ ಬೆಳೆಗಾರರು ತೆಗೆದುಕೊಂಡಿರತಕ್ಕಂಥ ಸಾಲವನ್ನು ಮರುಪಾವತಿ ಮಾಡಬೇಕಾಗುತ್ತದೆ. ಮಾರ್ಚ್ 31ರೊಳಗೆ ಸಾಲವನ್ನು ಮರುಪಾವತಿ ಮಾಡತಕ್ಕಂಥ ಸ್ಥಿತಿಯಲ್ಲಿ ಅಡಿಕೆ ಬೆಳೆಗಾರರು ಇಲ್ಲ.

ಅಧ್ಯಕ್ಷರು: ಮಾನ್ಯ ಮಂತ್ರಿಯವರು ಒಂದು ಪತ್ರವನ್ನು ಬರೆದು ಕಳುಹಿಸಿದ್ದಾರೆ. ಸದರಿ ವಿಷಯವನ್ನು ಮಧ್ಯಾಹ್ನ ಮೂರು ಗಂಟೆಗೆ ಪ್ರಸ್ತಾಪ ಮಾಡಬೇಕೆಂದು ಈ ಪತ್ರದ ಮೂಲಕ ಕೇಳಿಕೊಂಡಿದ್ದಾರೆ. ಏಕೆಂದರೆ.

ಶ್ರೀ ಪಿ.ಜಿ.ಆರ್. ಸಿಂಧ್ಯ: ಮಾನ್ಯ ಅಧ್ಯಕ್ಷರೆ, ಶೂನ್ಯ ವೇಳೆಯಲ್ಲಿ ಒಂದು ವಿಚಾರವನ್ನು ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡಬೇಕೆಂದು ತಮಗೆ ಪತ್ರ ಕಳುಹಿಸಿಕೊಟ್ಟಿದ್ದೇನೆ.

ಅಧ್ಯಕ್ಷರು: ಪತ್ರ ಕಳುಹಿಸಿಕೊಟ್ಟಿದ್ದೀರಿ. ಶೂನ್ಯ ವೇಳೆಯಲ್ಲಿ ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡುತ್ತೇನೆ.

ಆ) ವಿಷಯ: ಮಾದಿಗರಿಗೆ ಮೀಸಲಾತಿ ಬಗ್ಗೆ

ಶ್ರೀ ಎ.ನಾರಾಯಣಸ್ವಾಮಿ: ಮಾನ್ಯ ಅಧ್ಯಕ್ಷರೆ, ಮಾದಿಗರ ಮೀಸಲಾತಿ ಕುರಿತು ಪ್ರಸ್ತಾಪ ಮಾಡುವುದಕ್ಕೆ ಅವಕಾಶ ಕೊಡಬೇಕೆಂದು ತಮಗೆ ಈಗಾಗಲೇ ಪತ್ರ ಕಳುಹಿಸಿಕೊಟ್ಟಿದ್ದೇನೆ. ಆದ್ದರಿಂದ ನನಗೆ ಅವಕಾಶ ಕೊಡಿ.

ಅಧ್ಯಕ್ಷರು: ಸದರಿ ವಿಷಯವನ್ನು ಅರ್ಧಗಂಟೆ ಕಾಲಾವಕಾಶ ಸಂದರ್ಭದಲ್ಲಿ ಆಲೋ ಮಾಡುತ್ತೇನೆ. ಈ ವಿಷಯವನ್ನು ನಾಳೆ ತೆಗೆದುಕೊಳ್ಳುತ್ತೇನೆ.